ದೊಡ್ಡ ಬಳ್ಳಾಪುರದಲ್ಲಿ ನಬಾರ್ಡ್ ಯೋಜನೆಯಡಿ ಕೈಗೊಳ್ಳಲಾದ ಕೆಲಸಗಳು

1701 (2268) ಶ್ರೀ ಕೃಷ್ಣಪ್ಪ ಎ (ದೊಡ್ಡಬಳ್ಳಾಪುರ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ಮೂರು ವರ್ಷಗಳಿಂದ ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ನಬಾರ್ಡ್ ಯೋಜನೆಯಡಿ ಕೈಗೊಳ್ಳಲಾದ ಕೆಲಸಗಳಾವುವು;

ಆ) ಅವು ಯಾವ ಹಂತದಲ್ಲಿವೆ; ಈ ಕಾಮಗಾರಿಗಳು ಪೂರ್ಣಗೊಳ್ಳದೆ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಇ) ಕಾಮಗಾರಿಗಳು ಸ್ಥಗಿತಗೊಳ್ಳಲು ಕಾರಣವೇನು;

ಈ) ಈ ಕಾಮಗಾರಿಗಳು ಪೂರ್ಣಗೊಳ್ಳುವುದು ಎಂದು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು).

ಅ) ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.

1. ಯಲಹಂಕ ರಸ್ತೆಯ 48ನೇ ಕಿ.ಮೀ.ನಿಂದ ಮಧುಗಿರಿಗೆ ಸೇರುವ ರಸ್ತೆಯಲ್ಲಿ ಸೇತುವೆ ನಿರ್ಮಾಣ-14.30ಲಕ್ಷ

2. ಕೆ.ಎಸ್.ರಸ್ತೆಯಿಂದ ಮೆಣಸಿ ಮಾರ್ಗ ಶಾಕಲದೇವನಪುರ ಸೇರುವ ರಸ್ತೆ- 50ಲಕ್ಷ

3. ಹಾಡೋನಹಳ್ಳಿ ಮೆಳೇಕೋಟೆ ರಸ್ತೆಯಿಂದ ತಾಲ್ಲೂಕು ಗಡಿ ಸೇರುವ ರಸ್ತೆ-38ಲಕ್ಷ

4. ಅಡಕವಾಳ ಅಂಕೋನಹಳ್ಳಿ ರಸ್ತೆಯಿಂದ ತಾಲ್ಲೂಕು ಗಡಿ ಸೇರುವ ರಸ್ತೆ-17.27ಲಕ್ಷ

ಆ) ಮೇಲ್ಕಂಡ ಕಾಮಗಾರಿಗಳ ಪೈಕಿ ಕ್ರ.ಸಂ.1 ಮತ್ತು 4 ರ ಕಾಮಗಾರಿಗಳು ಪೂರ್ಣಗೊಂಡಿವೆ. ಉಳಿದ ಕಾಮಗಾರಿಗಳು ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಇ) ಗುತ್ತಿಗೆದಾರು ಕಾಮಗಾರಿಗಳನ್ನು ನಿರ್ವಹಿಸುವಲ್ಲಿ ವಿಳಂಬ ಮಾಡಿರುತ್ತಾರೆ.

ಈ) ಕಾಮಗಾರಿಗಳನ್ನು ಪ್ರಸಕ್ತ ಸಾಲಿನಲ್ಲಿಯೇ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ಮಂಡಿಳಿಯವ್ಯಾಪ್ತಿಯಲ್ಲಿ ಬಯಲು ಸೀಮೆ ಅಭಿವೃದ್ಧಿ

1702 (1515) ಶ್ರೀ.ಕಟ್ಟಿಮನಿ ಮನೋಹರ ಶಿವಪುತ್ರ (ಚಿಕ್ಕೋಡಿ): ಮಾನ್ಯ ಮೀನುಗಾರಿಕೆ ಬಂದರು ಮತ್ತು ಪ್ರದೇಶಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕೋಡಿ ತಾಲ್ಲೂಕಿನಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ವ್ಯಾಪ್ತಿಯಲ್ಲಿ ಯಾವ ಯಾವ ಪ್ರದೇಶಗಳು ಬರಲಿವೆ;

ಆ) ಈ ಪ್ರದೇಶಗಳ ಅಭಿವೃದ್ಧಿ ಬಗ್ಗೆ ಯಾವ ಯಾವ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ;